**All India Radio: Bangalore**
**Regional Bulletin In Kannada**
**03.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.07.2025 / 2.30 p.m.**

**<><><><>**

ಮುಖ್ಯಾಂಶಗಳು

1. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿಯಾದ ಸಚಿವ ಎಂ.ಬಿ. ಪಾಟೀಲ್ ; ನೀರಾವರಿ ಯೋಜನೆಗಳ ಕುರಿತಂತೆ ಚರ್ಚೆ
2. ರಾಜ್ಯದ ವಿವಿಧೆಡೆ ಧಾರಾಕಾರ ಮಳೆ ; ಉತ್ತರಕನ್ನಡ, ಕೊಡಗಿನಲ್ಲಿ ಜನಜೀವನ ಬಾಧಿತ
3. ಮುಂದಿನ ೨ ವರ್ಷದಲ್ಲಿ ಸ್ವದೇಶಿ ಡೆಂಘಿ ಲಸಿಕೆ ; ಐಸಿಎಂಆರ್ ಸ್ಪಷ್ಟನೆ
4. ಬೆಂಗಳೂರಿನಲ್ಲಿ ಶನಿವಾರ ನೀರಜ್ ಚೋಪ್ರಾ ಕ್ಲಾಸಿಕ್ ಜಾವೆಲಿನ್ ಸ್ಪರ್ಧೆ - ಅಂತಾರಾಷ್ಟ್ರೀಯ ಆಟಗಾರರು ಭಾಗಿ
5. ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣ ; ರಾಹುಲ್ ಗಾಂಧಿ ಮೌನ ಪ್ರಶ್ನಿಸಿದ ರಾಜ್ಯ ಬಿಜೆಪಿ

<><><><>

ಬೃಹತ್ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಬೆಂಗಳೂರಿನ ಸದಾಶಿವನಗರ ನಿವಾಸದಲ್ಲಿ ಇಂದು ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಬಳಿಕ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್ ಮುಂದಿನ ಸಚಿವ ಸಂಪುಟ ಸಭೆ ವಿಜಯಪುರದಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಕ್ಷೇತ್ರದ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ನೀರಾವರಿ ಸಚಿವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ. ತುಬಚಿ-ಬಬಲೇಶ್ವರ ಯೋಜನೆಯಡಿ ಬರುವ ತಿಕೋಟಾ, ಜಮಖಂಡಿ ಹಾಗೂ ಅಥಣಿ ತಾಲ್ಲೂಕಿನ ೧ ಲಕ್ಷದ ೩೦ ಸಾವಿರ ಎಕರೆ ಜಮೀನಿಗೆ ಬೇಸಿಗೆಯಲ್ಲಿ ನೀರಾವರಿ ಸೌಲಭ್ಯ ಕಲ್ಪಿಸುವ ಸಲುವಾಗಿ ಒಂದು ಕೆರೆ ನಿರ್ಮಿಸಲು ಅನುದಾನ ಮಂಜೂರು ಮಾಡುವುದು ಸೇರಿದಂತೆ ಹಲವು ಅಭಿವೃದ್ಧಿ ವಿಷಯ ಕುರಿತು ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><><>

ರಾಜ್ಯದ ಕರಾವಳಿ ಜಿಲ್ಲೆಗಳು ಸೇರಿದಂತೆ ಹಲವೆಡೆ ಧಾರಾಕಾರ ಮಳೆಯಾಗುತ್ತಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದೆ. ಇಂದು ಜಿಲ್ಲೆಯ ಎಲ್ಲಾ ಶಾಲೆ, ಕಾಲೇಜುಗಳಿಗೆ ರಜೆ ನೀಡಿ ಜಿಲ್ಲಾಧಿಕಾರಿ ವೆಂಕಟ್ ರಾಜ ಆದೇಶ ನೀಡಿದ್ದಾರೆ. ಮಳೆಯಿಂದಾಗಿ ಗ್ರಾಮೀಣ ಜನಜೀವನ ವ್ಯತ್ಯಯಗೊಂಡಿದ್ದು, ಗಾಳಿಯಿಂದಾಗಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಕಾವೇರಿ ಜಲಾನಯನ ವ್ಯಾಪ್ತಿಯಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದಾಗಿ ಕೊಡಗಿನ ಪ್ರಮುಖ ಜಲಾಶಯವಾದ ಹಾರಂಗಿಗೆ ನೀರಿನ ಹರಿವೂ ಹೆಚ್ಚಾಗಿದ್ದು ಪ್ರಸ್ತುತ ೭ ಸಾವಿರದ ೫೦೦ ಕ್ಯೂಸೆಕ್ ಹರಿವಿದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದೆ. ಸತತ ಮಳೆಯ ಹಿನ್ನೆಲೆಯಲ್ಲಿ ಇಂದು ಜಿಲ್ಲೆಯ ಸುಳ್ಯ ಮತ್ತು ಕಡಬ ತಾಲೂಕಿನ ಎಲ್ಲಾ ಅಂಗನವಾಡಿ ಕೇಂದ್ರಗಳು ಪ್ರಾಥಮಿಕ ಮತ್ತು ಪ್ರೌಢ ಶಾಲೆ ಸೇರಿದಂತೆ ಪದವಿ ಪೂರ್ವ ಕಾಲೇಜುವರೆಗೆ ರಜೆ ಘೋಷಿಸಲಾಗಿದೆ. ಸತತ ಮಳೆಯಿಂದಾಗಿ ಜಿಲೆಯಲ್ಲಿ ೧ ಸಾವಿರದ ೨೪ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೬೧ ಮನೆಗಳು ಸಂಪೂರ್ಣ ಹಾನಿಗೀಡಾಗಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಉತ್ತರಕನ್ನಡ ಜಿಲ್ಲೆಯ ಬಹುತೇಕ ಭಾಗಗಳಲ್ಲಿ

ಧಾರಾಕಾರ ಮಳೆ ಸುರಿಯುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ದಾಂಡೇಲಿ ಹಾಗೂ ಜೊಯಿಡಾ ತಾಲೂಕುಗಳ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ರಜೆ ಘೋಷಿಸಿದ್ದಾರೆ. ಸತತ ಮಳೆಗೆ  ಕಾರವಾರ ಹಾಗೂ ಶಿರಸಿಯಲ್ಲಿ ಭೂ ಕುಸಿತ ಸಂಭವಿಸಿದೆ. ಕಾರವಾರ ತಾಲೂಕಿನ ಬಾಳೆಮನೆ ಸಮೀಪ ಇಂದು ನಸುಕಿನ ಜಾವ ಭೂಕುಸಿತ ಉಂಟಾಗಿದ್ದು, ಕದ್ರಾದಿಂದ ಕೊಡಸಳ್ಳಿ ಅಣೆಕಟ್ಟೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಸಂಚಾರ ಸ್ಥಗಿತಗೊಂಡಿದೆ. ಸುರಕ್ಷತೆಯ ದೃಷ್ಟಿಯಿಂದ ಈ ಮಾರ್ಗದಲ್ಲಿ ವಾಹನ ಹಾಗೂ ಸಾರ್ವಜನಿಕರ ಸಂಚಾರವನ್ನು ಜಿಲ್ಲಾಧಿಕಾರಿ ನಿಷೇಧಿಸಿದ್ದಾರೆ. ದಾವಣಗೆರೆ ಜಿಲ್ಲಾದ್ಯಂತ ವ್ಯಾಪಕ ಮಳೆ ಮುಂದುವರಿದಿದ್ದು, ಸಾಮಾನ್ಯ ಜನ ಜೀವನ ಬಾಧಿತಗೊಂಡಿದೆ. ಶೀತಗಾಳಿ, ರಭಸವಾದ ಮಳೆಯಿಂದಾಗಿ ಕೃಷಿ ಚಟುವಟಿಕೆಗಳಿಗೆ ಅಡ್ಡಿ ಉಂಟಾಗಿದೆ. ತರಕಾರಿ ಮತ್ತು ತೋಟಗಾರಿಕಾ ಬೆಳೆಗಳಿಗೆ ಹಾನಿ ಸಂಭವಿಸಿದೆ. ಈ ಮಧ್ಯೆ ತುಂಗಾಭದ್ರಾ ನದಿಯ ನೀರಿನ ಮಟ್ಟದಲ್ಲಿ ಏರಿಕೆ ಕಂಡಿದ್ದು, ಹರಿಹರ ತಾಲೂಕು  ಆಡಳಿತ ಮತ್ತು  ಜಿಲ್ಲಾಡಳಿತಗಳು ಎಚ್ಚರಿಕೆ ವಹಿಸಿವೆ. ಮಹಾರಾಷ್ಟ್ರದ ಕೃಷ್ಣಾ ನದಿ ಪಾತ್ರದಲ್ಲಿ ಮತ್ತೆ ವ್ಯಾಪಕ ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದೆ. ಇದರಿಂದಾಗಿ ಕೃಷ್ಣಾ ನದಿಗೆ ಹೆಚ್ಚಿನ ಪ್ರಮಾಣದ ನೀರು ಹರಿಸಲಾಗುತ್ತಿದೆ.  ೩೦ ಕ್ರಸ್ಟ್ ಗೇಟ್‌ಗಳ ಮೂಲಕ ೯೫ ಸಾವಿರದ ೨೯೫ ಕ್ಯೂಸೆಕ್ ನೀರನ್ನು ಕೃಷ್ಣಾ ನದಿಗೆ ಹರಿಬಿಡಲಾಗುತ್ತಿದೆ ಎಂದು ಬಸವಸಾಗರ ಜಲಾಶಯದ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಬಿ.ಕೊನ್ನೂರ್ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಭೀಮಾ ಹಾಗೂ ಕೃಷ್ಣಾ ನದಿ ಸೇರಿದಂತೆ ಜಲಾಶಯಗಳ ವ್ಯಾಪ್ತಿಯಲ್ಲಿ ಯಾವುದೇ ಪರಿಸ್ಥಿತಿಯಲ್ಲಿ ಮಾನವ ಜೀವಹಾನಿಯಾಗದಂತೆ ಎಚ್ಚರಿಕೆ ವಹಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ  ಸೂಚನೆ ನೀಡಿದ್ದಾರೆ. ಎಲ್ಲ ನೋಡಲ್ ಅಧಿಕಾರಿಗಳು, ಆಯಾ ತಹಶೀಲ್ದಾರ್ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಯಾವುದೇ ಸಂದರ್ಭದಲ್ಲಿ ಮಾನವ, ಜಾನುವಾರು ಜೀವಹಾನಿಯಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ತಿಳಿಸಿದ್ದಾರೆ. ಕರಾವಳಿ ಜಿಲ್ಲೆಗಳು ಹಾಗೂ ಶಿವಮೊಗ್ಗ ಚಿಕ್ಕಮಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇಂದು ಗಾಳಿ ಸಹಿತ ಧಾರಾಕಾರ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><><>

ಭಾರತ ಇನ್ನು ೨ ವರ್ಷಗಳಲ್ಲಿ ಸ್ವದೇಶಿ ಡೆಂಘಿ ಲಸಿಕೆಯನ್ನು ಹೊಂದಲಿದೆ ಎಂದು ರಾಷ್ಟ್ರೀಯ ಸಾಂಕ್ರಾಮಿಕ ರೋಗಶಾಸ್ತ್ರ ಸಂಸ್ಥೆ - ಐಸಿಎಂಆರ್ ನಿರ್ದೇಶಕ ಡಾ. ಮನೋಜ್ ಮುರ್ಹೇಕರ್ ಹೇಳಿದ್ದಾರೆ. ಡಿಡಿ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಪ್ರಸ್ತುತ, ದೇಶದಲ್ಲಿ ಯಾವುದೇ ಪರವಾನಗಿ ಪಡೆದ ಡೆಂಘಿ ಲಸಿಕೆ ಇಲ್ಲ. ಈ ಕುರಿತು ಐಸಿಎಂಆರ್ ದೇಶದ ಐದು ಕೇಂದ್ರಗಳಲ್ಲಿ ಜಪಾನಿನ, ಎನ್ಸೆಫಾಲಿಟಿಸ್ ಲಸಿಕೆಗಾಗಿ ಅಧ್ಯಯನ ನಡೆಸುತ್ತಿದೆ. ಲಸಿಕೆಯನ್ನು ಎರಡು ಪ್ರಮಾಣದಲ್ಲಿ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ.  ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೧೯ ಸ್ಥಳಗಳಲ್ಲಿ ಪ್ರಯೋಗ ನಡೆಸಲಾಗುತ್ತಿದೆ, ಇದರಲ್ಲಿ ೧೦ ಸಾವಿರದ ೩೩೫ಕ್ಕೂ ಹೆಚ್ಚು ಆರೋಗ್ಯವಂತ ವಯಸ್ಕರು ಭಾಗವಹಿಸಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><>

ಅವಳಿ ಒಲಿಂಪಿಕ್ಸ್ ಪದಕ ವಿಜೇತ ಖ್ಯಾತ ಜಾವೆಲಿನ್ ಎಸೆತಗಾರ ನೀರಜ್ ಚೋಪ್ರಾ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿ ಮಾಡಿದರು. ಇದೇ ೫ ರಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ನೀರಜ್ ಚೋಪ್ರಾ ಕ್ಲಾಸಿಕ್ ಜಾವೆಲಿನ್ ಸ್ಪರ್ಧೆಯಲ್ಲಿ ಅವರು ಭಾಗವಹಿಸಲಿದ್ದಾರೆ. ನೀರಜ್ ಜೊತೆಗೆ ಅಂತಾರಾಷ್ಟ್ರೀಯ ಆಟಗಾರ ಜೂಲಿಯಸ್ ಯೆಗೊ ಮತ್ತು ಥಾಮಸ್ ರೋಹ್ಲರ್

ಭಾಗವಹಿಸಲಿದ್ದಾರೆ. ಗಾಯದ ಸಮಸ್ಯೆಯಿಂದಾಗಿ ಆಂಡರ್ಸನ್ ಪೀಟರ್ ಕಣದಿಂದ ಹಿಂದೆ ಸರೆದಿದ್ದಾರೆ. ಮೇ ೨೪ ರಂದು ನಡೆಯಬೇಕಿದ್ದ ಸ್ಪರ್ಧೆಯನ್ನು ಭಾರತ-ಪಾಕ್ ಸಂಘರ್ಷದ ಹಿನ್ನೆಲೆಯಲ್ಲಿ ಜುಲೈ ೫ಕ್ಕೆ ಮುಂದೂಡಲಾಗಿತ್ತು.

<><><><>

ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾಷ್ಟ್ರೀಯ ಅಂಧತ್ವ ಸಂಸ್ಥೆಯ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಡಾ. ಬಾಲಗಂಗಾಧರನಾಥ ಸ್ವಾಮೀಜಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಆಶಾಕಿರಣ ದೃಷ್ಟಿ ಕೇಂದ್ರವನ್ನು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಇಂದು ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಎಲ್ಲರೂ ಆಶಾಕಿರಣ ದೃಷ್ಟಿಕೇಂದ್ರದ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು. ಸ್ಥಳೀಯ ಶಾಸಕ ಪ್ರಿಯಾ ಕೃಷ್ಣ, ಆರೋಗ್ಯ ವಿಭಾಗದ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್, ರಾಷ್ಟ್ರೀಯ ಆರೋಗ್ಯ ಅಭಿಯಾನ ನಿರ್ದೇಶಕ ಅವಿನಾಶ್ ಮೆನನ್ ರಾಜೇಂದ್ರನ್, ಮದನಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ರೈತರ ಬಗ್ಗೆ ಅನುಕಂಪವಿರುವುದು ಕಾಂಗ್ರೆಸ್ ಆಡಳಿತವಿಲ್ಲದ ರಾಜ್ಯಗಳಿಗೆ ಮಾತ್ರ ಮೀಸಲಾಗಿದೆಯೇ ಎಂದು ರಾಜ್ಯ ಬಿಜೆಪಿ ಪ್ರಶ್ನಿಸಿದೆ. ರಾಜ್ಯದಲ್ಲಿ ೧ ಸಾವಿರದ ೧೮೦ ರೈತರು ಆತ್ಮಹತ್ಯೆಯಿಂದ ಸಾವನಪ್ಪಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಸಾಮಾಜಿಕ ಜಾಲತಾಣದಲ್ಲಿ ದೂರಿದ್ದಾರೆ. ರಾಹುಲ್ ಗಾಂಧಿ ದುಃಖಿತ ಕುಟುಂಬಗಳನ್ನು ಯಾಕೆ ಭೇಟಿ ಮಾಡಿಲ್ಲ ಎಂದು ಪ್ರಶ್ನಿಸಿದ್ದಾರೆ. ನಿಮ್ಮ ಸಹಾನುಭೂತಿ ಕಾಂಗ್ರೆಸ್ ಆಡಳಿತವಿಲ್ಲದ ರಾಜ್ಯಗಳಿಗೆ ಮಾತ್ರ ಮೀಸಲಾಗಿದೆಯೇ ಎಂದು ಪ್ರಶ್ನಿಸಿದ್ದಾರೆ.

<><><><>

ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ-೨೦೨೫ರ ಸಂಬಂಧ ಮನೆ ಮನೆಗೆ ಸ್ಟಿಕ್ಕರ್ ಅಂಟಿಸುವ ಕಾರ್ಯದಲ್ಲಿ ಕರ್ತವ್ಯಲೋಪ ಎಸಗಿರುವ ಮೂರು ಜನ ಬಿಬಿಎಂಪಿ ನೌಕರರನ್ನು ಅಮಾನತುಗೊಳಿಸಲಾಗಿದೆ. ಹೆಚ್.ಬಿ.ಆರ್ ಲೇಔಟ್ ಉಪ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಂದಾಯ ಪರಿವೀಕ್ಷಕರಾದ ರಮೇಶ್, ಕಂದಾಯ ವಸೂಲಿಗಾರರಾದ ಪೆದ್ದುರಾಜು ಹಾಗೂ ಕೆಂಗೇರಿ ಉಪ ವಿಭಾಗ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಂದಾಯ ವಸೂಲಿಗಾರರಾದ ಸಿ. ಸಂದಿಲ್ ಕುಮಾರ್ ಅವರನ್ನು ಕರ್ತವ್ಯಲೋಪದ ಮೇರೆಗೆ ಸೇವೆಯಿಂದ ಅಮಾನತುಗೊಳಿಸಲಾಗಿದೆ.

<><><><>

ಬಳ್ಳಾರಿಯ ವಿಜಯನಗರದ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಕಾನೂನು ಬಾಹಿರವಾಗಿ ನಡೆದ ಎರಡು ಪ್ರಕರಣಗಳ ಕುರಿತು ತನಿಖೆಗೆ ನೇಮಿಸಿದ ಬೆಳಗಾವಿ ಜಿಲ್ಲೆ ನಿವೃತ್ತ ಜಿಲ್ಲಾ ನ್ಯಾಯಾಧೀಶ ಡಿ.ಎಸ್.ಶಿಂಧೆ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಮುನಿರಾಜು ತಿಳಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>